ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**
**(ಮುಂದುವರೆದ ಉಪವೇಶನಗಳು)**
**ಸೋಮವಾರ, ದಿನಾಂಕ: ೧೩ನೇ ನವೆಂಬರ್, ೨೦೧೭**

---

**ಸಮೂಹ – I**

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.
೨. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.
೩. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.
೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.
೫. ವೈದ್ಯಕೀಯ ಶಿಕ್ಷಣ ಸಚಿವರು.
೬. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.
೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು.

---

## ಬಾಲ ಭವನ ಸೊಸೈಟಿಯಲ್ಲಿ ವೃಂದದ ಹುದ್ದೆಗಳ ನಾಮಾಂಕಿತ ಬದಲಾವಣೆ ರದ್ದುಪಡಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬ (೩೪೧೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಾಲ ಭವನ ಸೊಸೈಟಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಕರ್ತವ್ಯ ನಿರ್ವಹಿಸುತ್ತಿರುವ ಕೆಲವು ವೃಂದದ ಹುದ್ದೆಗಳಿಗೆ ಮಾತ್ರ ನಾಮಾಂಕಿತವನ್ನು ಬದಲಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹುದ್ದೆಗಳ ನಾಮಾಂಕಿತ ಬದಲಾವಣೆಯಿಂದಾಗಿ ಪ್ರಸ್ತುತ ಬಾಲ ಭವನ ಸೊಸೈಟಿಯಲ್ಲಿ ದಿ ಬಾಲ ಭವನ ಸೊಸೈಟಿ ಎಂಪ್ಲಾಯೀಸ್ ಸರ್ವಿಸ್ ರೂಲ್ಸ್ ೧೯೯೧ರಡಿಯಲ್ಲಿ ಸಕ್ರಮಗೊಂಡಿರುವ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇತರೆ ನೌಕರರಿಗೆ ಅನ್ಯಾಯ ಮಾಡಿದಂತಾಗಿರುವುದಿಲ್ಲವೆ ;

(ಇ) ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಅಳವಡಿಸಿಕೊಳ್ಳಲು ಕ್ರಮ ಜರುಗಿಸದೆ ಇರುವುದರಿಂದ ವಯೋ ನಿವೃತ್ತಿ ಅಂಚಿನಲ್ಲಿರುವ ನೌಕರರಿಗೆ ಅನ್ಯಾಯ ಎಸಗಿದಂತೆ ಆಗಿರುವುದಿಲ್ಲವೇ ;

(ಈ) ಈ ಹುದ್ದೆಯ ನಾಮಾಂಕಿತ ಬದಲಾವಣೆಗೆ ಸರ್ಕಾರದಿಂದ ಏಕೆ ಅನುಮೋದನೆ ಪಡೆದಿರುವುದಿಲ್ಲ ;

(ಉ) ಹಾಗಿದ್ದಲ್ಲಿ, ಈ ಹುದ್ದೆಗಳ ನಾಮಾಂಕಿತ ಬದಲಾವಣೆಯನ್ನು ರದ್ದುಪಡಿಸಲು ಸರ್ಕಾರ ಕ್ರಮ ಜರುಗಿಸುವುದೇ ?

## ವಿಶೇಷ ಪಾಲನಾ ಯೋಜನೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೪೭ (೩೪೪೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೆಚ್.ಐ.ವಿ. ಪೀಡಿತ ಮಕ್ಕಳಿಗಾಗಿ "ವಿಶೇಷ ಪಾಲನಾ ಯೋಜನೆ" ಯಾವಾಗ ಪ್ರಾರಂಭವಾಯಿತು ;

(ಆ) ಸದರಿ ಯೋಜನೆಯಡಿಯಲ್ಲಿ ಬರುವ ಫಲಾನುಭವಿಗಳು ಯಾರು ; ರಾಜ್ಯದಲ್ಲಿ ಎಷ್ಟು ಫಲಾನುಭವಿಗಳಿದ್ದಾರೆ ;

(ಇ) ಸದರಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ವಾರ್ಷಿಕವಾಗಿ ಎಷ್ಟು ಹಣದ ಅಗತ್ಯವಿದೆ ;

(ಈ) ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನ ಫಲಾನುಭವಿಗಳ ಸಂಖ್ಯೆ ಕೊರತೆ ಕುರಿತು ವಿವರ ನೀಡುವುದು ?

## ಅಕಾಡೆಮಿ ಮತ್ತು ರಂಗಾಯಣಗಳಲ್ಲಿ ನಾಟಕ ತರಬೇತಿ ನೀಡುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೮ (೩೪೪೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧೀನದಲ್ಲಿ ಬರುವ ಅಕಾಡೆಮಿ ಮತ್ತು ರಂಗಾಯಣಗಳಲ್ಲಿ ೨೦೧೫–೧೬, ೨೦೧೬–೧೭ರಲ್ಲಿ ಆಸಕ್ತ ಯುವಕ ಮತ್ತು ಯುವತಿಯರಿಗೆ ನೀಡಲಾಗುತ್ತಿರುವ ತರಬೇತಿಗಳಾವುವು ; ತರಬೇತಿಗೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಜ್ಯಾದ್ಯಂತ ಪೌರಾಣಿಕ ನಾಟಕವನ್ನು ಕಲಿಸುತ್ತಿರುವ ಗುರುಗಳನ್ನು (ನಾಟಕ ಮೇಷ್ಟ್ರುಗಳನ್ನು) ತಯಾರು ಮಾಡಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆಯೇ ; ಆಸಕ್ತ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ನೀಡುವ ಆಲೋಚನೆ ಇದೆಯೇ ;

(ಇ) ರಾಜ್ಯದ ಆಯಾ ಜಿಲ್ಲೆಗಳಲ್ಲಿರುವ ಗ್ರಾಮೀಣ ಭಾಗದಲ್ಲಿರುವ ಕಲೆಗಳ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಅಧ್ಯಯನ ನಡೆಸುವ ಆಲೋಚನೆ ಸರ್ಕಾರಕ್ಕೆ ಇದೆಯೇ ?

## ಮರಾಠ ಸಮಾಜವನ್ನು ೩'ಬಿ' ಯಿಂದ ೨(ಎ)ಗೆ ಸೇರಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯ (೩೩೫೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಂಕರಪ್ಪನವರ ವರದಿಯಂತೆ ಮರಾಠ ಸಮಾಜವನ್ನು ಮರಾಠ ಸಮಾಜಕ್ಕೆ ಸೇರಿರುವ ಅರೆ ಮರಾಠ, ಕುಣಬಿ ಮರಾಠ, ಕುಳವಾಡಿ, ಕೊಂಕಣಿ ಮರಾಠಗಳನ್ನು ೩'ಬಿ' ಯಿಂದ ೨(ಎ)ಗೆ ಸೇರಿಸಲು ಮರಾಠ ಸಮಾಜದವರು ಪ್ರತಿಭಟನೆ ಮಾಡಿ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಸದರಿ ಮರಾಠ ಸಮಾಜದವರನ್ನು ೩'ಬಿ' ಯಿಂದ ೨(ಎ)ಗೆ ಸೇರಿಸಲು ಎಷ್ಟು ಕಾಲಾವಕಾಶ ಬೇಕಾಗುವುದು ; (ವಿವರ ನೀಡುವುದು)

(ಇ) ಈ ಬಗ್ಗೆ ಸರ್ಕಾರ ಕೂಡಲೇ ಬೇಡಿಕೆ ಈಡೇರಿಸಲು ಕ್ರಮ ಕೈಗೊಳ್ಳುವುದೆ ? (ವಿವರ ನೀಡುವುದು)

## ಹುಬ್ಬಳ್ಳಿ, ಧಾರವಾಡ ಜಿಲ್ಲೆಗಳಲ್ಲಿ ಡೆಂಗ್ಯೂ ಹಾಗೂ ಚಿಕೂನ್ ಗುನ್ಯ ತಡೆಗಟ್ಟುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೦ (೩೪೦೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹುಬ್ಬಳ್ಳಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ ಮತ್ತು ಚಿಕೂನ್‌ಗುನ್ಯಕ್ಕೆ ತುತ್ತಾಗಿ ದಾಖಲಾದ ರೋಗಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಡೆಂಗ್ಯೂ ಮತ್ತು ಚಿಕೂನ್ ಗುನ್ಯ ರೋಗದ ಮುಖ್ಯ ಲಕ್ಷಣಗಳೇನು ; ಈ ಸಾಂಕ್ರಾಮಿಕ ರೋಗ ಹರಡದಂತೆ ಆರೋಗ್ಯ ಇಲಾಖೆ ತೆಗೆದುಕೊಂಡ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳೇನು ? (ವಿವರ ನೀಡುವುದು)

## ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೩೬೧ (೩೩೯೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಯಾವ ಯಾವ ಯೋಜನೆಗಳಡಿ ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ ; (ಯೋಜನಾವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಆ) ೨೦೧೩–೧೪ ರಿಂದ ೨೦೧೭–೧೮ನೇ ಸಾಲಿನವರೆಗೆ ರಾಜ್ಯದಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಆ ಪೈಕಿ ಎಷ್ಟು ಕೊಳವೆ ಬಾವಿಗಳಿಗೆ ಮೋಟಾರ್, ಪೈಪ್ ವೈರ್ ಹಾಗೂ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ; ವಿದ್ಯುತ್ ಸಂಪರ್ಕ ಒದಗಿಸಲು ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಫಲಾನುಭವಿವಾರು ಮಾಹಿತಿ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ವಿದ್ಯುತ್ ಸಂಪರ್ಕ ಕೋರಿ ನೋಂದಾಯಿಸಿಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಎ.ಪಿ.ಎಲ್ ಮತ್ತು ಬಿ.ಪಿ.ಎಲ್. ಕುಟುಂಬಗಳಿಗೆ ಶಸ್ತ್ರ ಚಿಕಿತ್ಸೆ ವೆಚ್ಚ ಭರಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೨ (೩೪೫೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಎ.ಪಿ.ಎಲ್. ಹಾಗೂ ಬಿ.ಪಿ.ಎಲ್. ಕುಟುಂಬಗಳಿಗೆ ಶಸ್ತ್ರ ಚಿಕಿತ್ಸಾ ವೆಚ್ಚ ಭರಿಸಲು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ಹಾಗೂ ಗುರುತಿಸಲಾದ ಆಸ್ಪತ್ರೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸೌಲಭ್ಯಗಳನ್ನು ಪಡೆಯಲು ಇರುವ ಮಾನದಂಡಗಳೇನು ಹಾಗೂ ಇಲ್ಲಿಯವರೆಗೆ ಎಷ್ಟು ಎ.ಪಿ.ಎಲ್. ಹಾಗೂ ಬಿ.ಪಿ.ಎಲ್. ಕುಟುಂಬಗಳು ಯೋಜನೆಗಳ ಲಾಭ ಪಡೆದುಕೊಂಡಿವೆ ; (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸಾರ್ವಜನಿಕರಿಗೆ ಈ ಯೋಜನೆಗಳ ಲಾಭ ಪಡೆದುಕೊಳ್ಳಲು ಸರ್ಕಾರವು ಅನುಸರಿಸುವ ಕ್ರಮಗಳು ಯಾವುವು ? (ಮಾಹಿತಿ ನೀಡುವುದು)

## ವಿಶೇಷ ಸಾಮರ್ಥ್ಯ (ದಿವ್ಯಾಂಗ) ಹೊಂದಿರುವ ಮಕ್ಕಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೫೩ (೩೪೦೫) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅನೇಕ ವಿಶೇಷ ಸಾಮರ್ಥ್ಯ (ದಿವ್ಯಾಂಗ) ಹೊಂದಿರುವ ೦–೧೮ ವಯಸ್ಸಿನ ಮಕ್ಕಳನ್ನು ಗುರುತಿಸುವ ಬಗ್ಗೆ ಸಮೀಕ್ಷೆ ನಡೆಸಲಾಗಿದೆಯೇ ;

(ಆ) ನಡೆಸಿದ್ದರೆ, ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಬಹು ವಿಧದ ಅಂಗವಿಕಲತೆಯಿಂದ ಬಳಲುತ್ತಿರುವ ಮಕ್ಕಳಿಗೆ ತರಬೇತಿ, ಉದ್ಯೋಗ ಹಾಗೂ ಪುನರ್ವಸತಿ ಕಲ್ಪಿಸುವ ಬಗ್ಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಈ) ಈ ರೀತಿಯ ಬಹು ವಿಧದ ವಿಕಲತೆಯಿಂದ ಬಳಲುತ್ತಿರುವ ಮಕ್ಕಳಿಗೆ ತರಬೇತಿ ನೀಡಲು ಲಭ್ಯವಿರುವ ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಈ ರೀತಿಯ ವಿಕಲತೆ ಹೊಂದಿದವರಿಗೆ ತರಬೇತಿ ನೀಡಲು ವಿಶೇಷ ಶಿಕ್ಷಕರ ಲಭ್ಯತೆ ಇದೆಯೇ ? (ವಿವರ ನೀಡುವುದು)

## ಕ್ರೈಸ್ ಅಡಿಯಲ್ಲಿ ಮೊರಾರ್ಜಿ, ರಾಣಿಚೆನ್ನಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರ ವೇತನ ಶ್ರೇಣಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೫೪ (೩೩೫೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕ್ರೈಸ್ ಅಡಿಯಲ್ಲಿ ಮೊರಾರ್ಜಿ, ರಾಣಿಚೆನ್ನಮ್ಮ ಹಾಗೂ ಇನ್ನಿತರೆ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಚಾರ್ಯರ/ಶಿಕ್ಷಕರ ವೇತನ ಶ್ರೇಣಿ ಏನು ;

(ಆ) ಅಕ್ಕಪಕ್ಕದ ರಾಜ್ಯದ ಹಾಗೂ ಕೇಂದ್ರದ ಶಿಕ್ಷಕರ ವೇತನ ಶ್ರೇಣಿಗೆ ಹೋಲಿಸಿದಾಗ, ಈ ಶಿಕ್ಷಕರಿಗೆ ಆಗುತ್ತಿರುವ ತಾರತಮ್ಯದ ಕಲ್ಪನೆ ಸರ್ಕಾರದ ಗಮನಕ್ಕಿದೆಯೇ;

(ಇ) ಜವಾಹರ್ ನವೋದಯ ವಿದ್ಯಾಲಯಗಳ ಮಾದರಿಯಾಗಿ ಈ ಶಾಲೆಗಳನ್ನು ಸರ್ಕಾರ ಆರಂಭಿಸಿದ್ದು ನಿಜವೇ ; ಜವಾಹರ್ ನವೋದಯ ವಿದ್ಯಾಲಯ ಶಿಕ್ಷಕರ ವೇತನ ಶ್ರೇಣಿ ಏನು ; ಕ್ರೈಸ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ವೇತನ ಶ್ರೇಣಿ ಏನು ;

(ಈ) ಸಾರ್ವಜನಿಕ ಶಿಕ್ಷಣ ಇಲಾಖೆ ಶಿಕ್ಷಕರಿಗಿಂತಲೂ ಕಡಿಮೆ ಸೌಲಭ್ಯ ಒದಗಿಸಿರುವುದು ನ್ಯಾಯೋಚಿತವೇ ; ಅಲ್ಪ ಸಂಖ್ಯಾತ ಇಲಾಖೆಯ ಮೊರಾರ್ಜಿ ರಾಣಿ ಚೆನ್ನಮ್ಮ ಶಾಲೆಗಳಿಗಿಂತ ಕಡೆಯಾಗಿ ಈ ಸಂಸ್ಥೆಯನ್ನು ಹಾಗೂ ಶಿಕ್ಷಕರನ್ನು ನಡೆಸಿಕೊಂಡು ಬರುತ್ತಿರುವುದು ಸರಿಯೇ ; ಇದನ್ನು ಸರಿಪಡಿಸಲು ಸರ್ಕಾರದ ಕ್ರಮ ಏನು ?

## ಹಿಂದುಳಿದ ವರ್ಗಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೫ (೩೩೭೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿರುವುದು ನಿಜವೇ ; ಹಾಗಿದ್ದರೆ, ಆ ಕಾರ್ಯಕ್ರಮಗಳ ಪೂರ್ಣ ವಿವರ ನೀಡುವುದು ;

(ಆ) ಪ್ರತಿ ಕಾರ್ಯಕ್ರಮಗಳಿಗೆ ೨೦೧೩–೧೪ ರಿಂದ ೨೦೧೭–೧೮ ರವರೆಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು ; ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು ; ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ? (ವರ್ಷಾವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

## KSTDC ನಿಗಮದ ಕೇಂದ್ರ ಕಛೇರಿ ಸ್ಥಳಾಂತರದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೫೬ (೩೪೪೨) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಪ್ರವಾಸೋದ್ಯಮ ನಿಗಮ (KSTDC)ದ ಕೇಂದ್ರ ಕಛೇರಿ ಹಾಗೂ ಬಾದಾಮಿ ಹೌಸ್‌ನ ಬುಕ್ಕಿಂಗ್ ಕಛೇರಿಗಳು ಹಾಲಿ ಎಲ್ಲಿ ಕಾರ್ಯನಿರ್ವಹಿಸುತ್ತಿವೆ;

(ಆ) ಈ ಕಛೇರಿಗಳನ್ನು ಸ್ಥಳಾಂತರಗೊಳಿಸಲು ಕಾರಣಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಬಾದಾಮಿ ಹೌಸ್ ಬುಕ್ಕಿಂಗ್ ಕಛೇರಿಯನ್ನು ತೆರವುಗೊಳಿಸಿ ಸ್ಥಳಾಂತರಿಸಲು ಕಾರಣಗಳೇನು ; ಇದರ ಸಂಬಂಧ ಯಾವ ನ್ಯಾಯಾಲಯದ ಆದೇಶವಿದೆ ನಿಗಮವು ಮೇಲ್ಮನವಿ ಸಲ್ಲಿಸಲು ಸಾಧ್ಯವಿಲ್ಲವೇ ;

(ಈ) ನಗರದ ಜನರಿಗೆ ಅನುಕೂಲಕರವಾಗಿದ್ದ ಬಾದಾಮಿ ಹೌಸ್ ಬುಕ್ಕಿಂಗ್ ಕಛೇರಿಯನ್ನು ಉಳಿಸಿಕೊಳ್ಳಲು ಸರ್ಕಾರವು ನಡೆಸಿದ ಪ್ರಯತ್ನಗಳೇನು ; (ವಿವರವಾದ ಮಾಹಿತಿ ನೀಡುವುದು)

(ಉ) ಈ ಎರಡು ಕಛೇರಿಗಳಿಗೆ ಹಿಂದೆ ಕಟ್ಟುತ್ತಿದ್ದ ಬಾಡಿಗೆ ಎಷ್ಟು ; ಹಾಲಿ ನೀಡುತ್ತಿರುವ ಬಾಡಿಗೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

## ಸರ್ಕಾರದ ಗೋದಾಮುಗಳಲ್ಲಿ ಆಹಾರ ಧಾನ್ಯಗಳು ಸರಿಯಾಗಿ ವಿತರಣೆಯಾಗದೆ ಕೊಳೆಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**
**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**
**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೫೭ (೩೩೮೭+೩೫೨೯+೩೩೫೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ಗೋದಾಮುಗಳಲ್ಲಿ ಅನ್ನಭಾಗ್ಯದ ಅಕ್ಕಿ, ಗೋಧಿ, ಆಹಾರ ಧಾನ್ಯಗಳ ರಾಶಿಯು ಅಧಿಕಾರಿಗಳ ನಿರ್ಲಕ್ಷ್ಯದಿಂದ ಕೊಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಇದರ ಸಂರಕ್ಷಣೆಗೆ ಹಾಗೂ ಸರಿಯಾದ ವಿತರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಪ್ರತಿ ಸಂಗ್ರಹಗಾರ/ತಾಲ್ಲೂಕು/ಜಿಲ್ಲೆವಾರು ಎಷ್ಟು ಪ್ರಮಾಣದ ಆಹಾರ ಧಾನ್ಯಗಳು ಹಾನಿಯಾಗಿದೆ ; (ಹಾನಿಯಾದ ಆಹಾರ ಧಾನ್ಯಗಳ ಪ್ರಮಾಣ ಸಹಿತ ವಿವರ ನೀಡುವುದು)

(ಆ) ಈ ನಿಟ್ಟಿನಲ್ಲಿ ಸಂಭವಿಸಿದ ಹಾನಿಗೆ ಯಾರು ಹೊಣೆಗಾರರು ; ಅವರ ಮೇಲೆ ತೆಗೆದುಕೊಂಡಿರುವ ಕ್ರಮವೇನು ; (ಹೆಸರು, ಹುದ್ದೆವಾರು ವಿವರ ನೀಡುವುದು)

(ಇ) ೨೦೧೫–೧೬, ೨೦೧೬–೧೭ನೇ ಸಾಲುಗಳಲ್ಲಿ ಸರ್ಕಾರ ವಿತರಿಸಿದ ಒಟ್ಟು ಆಹಾರ ಧಾನ್ಯಗಳ ಪ್ರಮಾಣ ಎಷ್ಟು ; ಆ ಪೈಕಿ ವಿತರಿಸಲಾದ ಆಹಾರದ ಪ್ರಮಾಣ ಎಷ್ಟು ; ಯಾವುವು ; ಗೋದಾಮುಗಳಲ್ಲಿ ಉಳಿದ ಆಹಾರ ಧಾನ್ಯಗಳ ಪ್ರಮಾಣವೆಷ್ಟು ;

(ಈ) ೨೦೧೫–೧೬, ೨೦೧೬–೧೭ನೇ ಸಾಲುಗಳಲ್ಲಿ ಅನ್ನಭಾಗ್ಯ ಯೋಜನೆಯಡಿ ಖರ್ಚಾದ ಅನುದಾನವೆಷ್ಟು ; ನಿಗಧಿಪಡಿಸಿದ್ದ ಅನುದಾನವೆಷ್ಟು ; ಉಳಿದ ಅನುದಾನವೆಷ್ಟು ; (ವಿವರ ನೀಡುವುದು)

(ಉ) ಪ್ರತಿ ಕೆ.ಜಿ. ಆಹಾರ ಧಾನ್ಯವನ್ನು ಸಂಗ್ರಹಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡುವ ಪಾಲು ಎಷ್ಟು ? (ವಿವರ ನೀಡುವುದು)

## ಪಡಿತರ ಚೀಟಿ ವಿತರಣೆಯ ಗೊಂದಲ ಮತ್ತು ವ್ಯವಸ್ಥೆ ಸುಧಾರಣೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮ (೩೫೩೪) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೊಸದಾಗಿ ಪಡಿತರ ಚೀಟಿಗೆ ಅರ್ಜಿಯನ್ನು ಸಲ್ಲಿಸಿ ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್‌ನ್ನು ಪಡೆಯಲು ಇರುವ ಮಾನದಂಡಗಳು ಯಾವುವು; ಪ್ರಸ್ತುತ ರೇಷನ್ ಕಾರ್ಡ್ ವಿತರಣೆಗೆ ಅನುಸರಿಸುತ್ತಿರುವ ಕ್ರಮಗಳು ಯಾವುವು;

(ಆ) ಪಡಿತರ ಚೀಟಿಯ ತಿದ್ದುಪಡಿಗೆ ಇರುವ ಮಾನದಂಡವೇನು ; ಪ್ರಸ್ತುತ ತಿದ್ದುಪಡಿಗೆ ಅನುಸರಿಸುತ್ತಿರುವ ಕ್ರಮಗಳಾವುವು ; ತಿದ್ದುಪಡಿಗೆ ಕುಟುಂಬದ ಎಲ್ಲಾ ಸದಸ್ಯರ ಹಾಜರಾತಿಯನ್ನು ಕಡ್ಡಾಯಗೊಳಿಸಿರುವುದರ ಔಚಿತ್ಯವೇನು;

(ಇ) ಹಿಂದೆ ತಾಲ್ಲೂಕು ಕಛೇರಿಯಲ್ಲಿ ಮುದ್ರಿತವಾಗಿ ರೂ.೫೦ ಗೆ ವಿತರಣೆ ಮಾಡುಲಾಗುತ್ತಿದ್ದ ಪಡಿತರ ಚೀಟಿಯ ಮುದ್ರಣವನ್ನು ಖಾಸಗಿ ಏಜೆನ್ಸಿಗೆ ನೀಡಲು ಕಾರಣವೇನು ; ಇದರಿಂದ ಪಡಿತರ ಚೀಟಿಯ ಮೌಲ್ಯ ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಪಡಿತರ ಚೀಟಿಯ ಸುಧಾರಣೆಗೆ ಕೈಗೊಂಡ ಕ್ರಮಗಳು ಯಾವುವು ?

## ಕೊಡಗು ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಸುರಕ್ಷತೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)** –

೩೫೯ (೩೪೧೮) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಗುರುತಿಸಿರುವ ಒಟ್ಟು ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು; ಅವು ಯಾವುವು ; (ತಾಲ್ಲೂಕುವಾರು ಪ್ರತಿ ತಾಣದ ಹೆಸರು ಮತ್ತು ಪ್ರಾಮುಖ್ಯತೆ ಹಾಗೂ ವಿಶೇಷತೆಗಳ ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೦೫ ವರ್ಷಗಳಲ್ಲಿ ಸದರಿ ತಾಣಗಳಲ್ಲಿ ದುರಂತ ಅಥವಾ ಅಪಘಾತ ಅಥವಾ ಇನ್ಯಾವುದೇ ತೊಂದರೆಗೊಳಗಾಗಿ ವರದಿಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಣವಾರು, ಪ್ರಕರಣವಾರು ವರ್ಷವಾರು ವಿವರ ನೀಡುವುದು)

(ಇ) ಸದರಿ ಪ್ರಕರಣಗಳಲ್ಲಿ ಮೃತ್ಯುಗೀಡಾದವರ ಸಂಖ್ಯೆ ಎಷ್ಟು ; ಮೃತರ ಕುಟುಂಬ ವರ್ಗಕ್ಕೆ ನೀಡಿರುವ ಪರಿಹಾರವೇನು ; (ತಾಣವಾರು, ಪ್ರಕರಣವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಕೈಗೊಂಡಿರುವ ಸುರಕ್ಷತಾ ಕ್ರಮಗಳೇನು ?

## ಸಮುದಾಯ ಆರೋಗ್ಯ ಕೇಂದ್ರಗಳ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವಿಧಿಸುತ್ತಿರುವ ಅತಿ ಹೆಚ್ಚು ದರದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೦ (೩೪೩೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆಗಳೆಷ್ಟು; ಈ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸಲು ಮಂಜೂರಾಗಿರುವ ಹುದ್ದೆಗಳು ಎಷ್ಟು; ಉದ್ದೇಶಗಳು ಯಾವುವು ; ಮತ್ತು ಅವುಗಳ ಸಂಖ್ಯೆ ಎಷ್ಟು ;

(ಆ) ಸಾರ್ವಜನಿಕ ಆಸ್ಪತ್ರೆಗಳಲ್ಲಿ ಹಾಲಿ ಖಾಲಿ ಇರುವ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಖಾಸಗಿ ಹೈಟೆಕ್ ಆಸ್ಪತ್ರೆಗಳು ವಿಧಿಸುತ್ತಿರುವ ಅತೀ ಹೆಚ್ಚು ದರಕ್ಕೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಚಿಕಿತ್ಸೆಗಾಗಿ ಬಂದ ರೋಗಿಗಳಿಗೆ ವಿವಿಧ ಪರೀಕ್ಷೆಗಳನ್ನು ಕಡ್ಡಾಯವಾಗಿ ಮಾಡಿಸಲೇಬೇಕೆಂದು ಭಯದ ವಾತಾವರಣ ನಿರ್ಮಾಣ ಮಾಡಿ ಹಣ ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮವೇನು ;

(ಉ) ಎಲ್ಲಾ ತರಹದ ಪರೀಕ್ಷೆಗಳಿಗೂ ಸರ್ಕಾರವೇ ಏಕರೂಪ ದರವನ್ನು ನಿಗಧಿಪಡಿಸಲು ಸಾಧ್ಯವಿಲ್ಲವೇ ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 649, ಪ್ರತಿಗಳು 1500